ಹಿರೇಹೊನ್ನಳ್ಳಿ, ತುಂಬವಾಡ, ಮೊಮ್ಮಿಘಟ್ಟ ಮತ್ತು ಬಿ. ಸಿಗ್ಗಿಗಟ್ಟಿ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿಯ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಬೇಡಿಕೆ ಬಂದಿರುತ್ತದೆ.

ಕಲ್‌ಘಟಗಿ ವಿಧಾನಸಭಾ ಕ್ಷೇತ್ರದಲ್ಲಿ ಈ ಕೆಳಕಂಡ ಸ್ಥಳಗಳಲ್ಲಿ ಪರಿಶಿಷ್ಟ ವರ್ಗದ ಮಂಜೂರಾತಿಗೆ ಪ್ರಸ್ತಾವನೆ ಬಂದಿರುತ್ತದೆ.

1. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳು :-

1. ಬಮ್ಮಿಗಟ್ಟ ಬಾಲಕ
2. ದುಮ್ಮವಾಡ ಬಾಲಕ
3. ಸಂಶಿ ಬಾಲಕ

4646 (5012) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) :- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇತರ ಹಿಂದುಳಿದ ವರ್ಗದವರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಲು ಎಷ್ಟು ಕಾಲಾವಧಿ ನಿರ್ಧರಿಸಲಾಗಿದೆ;

ಆ) ಇದರಿಂದ ಸಾರ್ವಜನಿಕರಿಗೆ ಅದರಲ್ಲೂ ಶೈಕ್ಷಣಿಕ ವಿದ್ಯಾರ್ಥಿಗಳಿಗೆ ಹಾಗೂ ಉದ್ಯೋಗಾಂಕ್ಷೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹತ್ತು ದಿನಗಳ ಕಾಲಾವಧಿಯನ್ನು ನಿಗದಿಪಡಿಸಲಾಗುತ್ತದೆ.

ಆ) ಜಾತಿ ಆದಾಯ ಪ್ರಮಾಣ ಪತ್ರ ನೀಡುವ ಮುನ್ನ ತಹಶೀಲ್ದಾರ್ ರವರ ಕಛೇರಿಯಲ್ಲಿ ಸಲ್ಲಿಸಲಾಗುವ ಅರ್ಜಿಗಳನ್ನು ಸ್ಥಳೀಯ ವಿಚಾರಣೆ ಮತ್ತು ಗ್ರಾಮ ಲೆಕ್ಕಿಗರು ಹಾಗೂ ರಾಜಸ್ವ ನಿರೀಕ್ಷಕರು ಅವರುಗಳಿಂದ ವರದಿಗಳನ್ನು ಪಡೆದು ಅರ್ಜಿದಾರರು ಕೋರಿರುವ ಮೀಸಲಾತಿಗೆ ಅರ್ಹರಿರುವುದನ್ನು ಖಚಿತ ಪಡಿಸಿಕೊಂಡು ಪ್ರಮಾಣ ಪತ್ರ ನೀಡಬೇಕಾಗುತ್ತದೆ. ಅದರಿಂದ ಸರ್ಕಾರದ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ಕಾಲಾವಧಿ, ಸೂಕ್ತವಾಗಿರುತ್ತದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗಕ್ಕೆ ಒಮ್ಮೆ ವಿತರಿಸಿದ ಜಾತಿ ಪ್ರಮಾಣ ಪತ್ರ ರದ್ದು ಪಡಿಸುವವರೆಗೆ ಜಾರಿಯಲ್ಲಿರುತ್ತದೆ. ಆದಾಯ ಪ್ರಮಾಣ ಪತ್ರ ವರ್ಷಗಳವರೆಗೆ ಉಪಯೋಗಿಸಿಕೊಳ್ಳಲು ಅವಕಾಶವಿರುತ್ತದೆ. (ವಿದ್ಯಾಭ್ಯಾಸಕ್ಕಾಗಿ ಮಾತ್ರ)

ಅದರಿಂದ ವಿದ್ಯಾರ್ಥಿಗಳಿಗೆ ಸಮಸ್ಯೆಗಳು ಉಂಟಾಗುವ ಪರಿಸ್ಥಿತಿ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.